ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ , ಕುಂದಾಪುರ

ಸಿ.ಸಿ. ನಂಬ್ರ: 1255/2016

ಚಾಸಾ:13 ಪ್ರಾಸಾ:9

ದಿನಾಂಕ: 19.02.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀಮತಿ ಸುಜಾತ ಸಾಲಿಯಾನ್ |
| ಗಂಡನ ಹೆಸರು | : | ಭಾಸ್ಕರ |
| ವಯಸ್ಸು | : | 59 ವರ್ಷ |
| ಉದ್ಯೋಗ | : | ಪಿ ಎಸ್ ಐ |
| ವಾಸ ಸ್ಥಳ | : | ಉಡುಪಿ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ನಾನು 2011 ರಿಂದ 08-05-2016ರವರೆಗೆ ಕುಂದಾಪುರದ ಮಹಿಳಾ ಪೊಲೀಸ್ ಠಾಣೆಯಲ್ಲಿ ಮಹಿಳಾ ಪೊಲೀಸ್ ಉಪ ನಿರೀಕ್ಷಕಳಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ: 08-07-2015 ರಂದು ಚಾಸಾ-12ರವರಿಂದ ಕಡತವನ್ನು ಪಡೆದು ಪರಿಶೀಲಿಸಿ ತನಿಖೆ ಮುಂದುವರೆಸಿರುತ್ತೇನೆ.

ಅದೇ ದಿನ ತಕ್ಷೀರು ಸ್ಥಳದ ಮಹಜರನ್ನು 12-15 ರಿಂದ 1ರವರೆಗೆ ತಯಾರಿಸಿ ಸಾಕ್ಷಿದಾರರಾದ ಚಾಸಾ-2 ಮತ್ತು 5 ರವರ ಸಮಕ್ಷಮ ತಯಾರಿಸಿರುತ್ತೇನೆ. ಮಹಜರು ಕಾಲಕ್ಕೆ ಛಾಯಚಿತ್ರವನ್ನು ತೆಗೆದಿರುತ್ತೇನೆ. ಅದೇ ದಿನ ಚಾಸಾ-1 ರವರ ಮರುಹೇಳಿಕೆ ಹಾಗೂ ಚಾಸಾ-2 ರಿಂದ 4, 6 ಮತ್ತು 7 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ.

ದಿಃ 16-07-2015 ರಂದು ಚಾಸಾ-1ರವರು ನ್ಯಾಯಾಲಯದ ಮುಂದೆ ಹಾಜರುಪಡಿಸಿ ಕಲಂ 164ರ ಹೇಳಿಕೆಯನ್ನು ಪಡೆದಿರುತ್ತೇನೆ. ಆಪಾದಿತನ ಮೊಬೈಲು ಮತ್ತು ಸಿ.ಡಿ.ಆರ್ ರೆಕಾರ್ಡ್ ನ್ನು ಪಡೆದು ಕಡತಕ್ಕೆ ಅಳವಡಿಸಿರುತ್ತೇನೆ. ನಂತರ ಆರೋಪಿ ಗಂಗೊಳ್ಳಿ ಪಂಚಾಯಿತಿಯಲ್ಲಿ ಕೆಲಸ ಮಾಡುತ್ತಿದ್ದ ಬಗ್ಗೆ ಹಾಜರಾತಿ ಪ್ರಮಾಣ ಪತ್ರವನ್ನು ಪಡೆದು ದಿಃ 02-01-2016 ರಂದು ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ಸಾಕ್ಷಿ ನಿಪಿ-2 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ-3ನ್ನು ನೋಡಿ ಗುರುತಿಸಿರುತ್ತಾರೆ. ಗಂಗೊಳ್ಳಿ ಗ್ರಾಮ ಪಂಚಾಯಿತಿಯ ಪತ್ರವನ್ನು ನಿಪಿ-10 ಎಂದು, ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು.

<u>**ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಆರ್ ಎಂ ಎಸ್ ರವರಿಂದಃ**</u>

ನಮ್ಮ ಠಾಣೆಯಿಂದ ಘಟನಾ ಸ್ಥಳ ಸುಮಾರು 25 ಕಿ.ಮೀ ದೂರದಲ್ಲಿ ಇದೆ. ಆರೋಪಿಯು ಪರಿಶಿಷ್ಟ ಜಾತಿಗೆ ಸೇರಿದವರು. ಚಾಸಾ-1ರವರು ಗ್ರಾಮ ಪಂಚಾಯಿತಿಗೆ ನೀಡಿದ ಯಾವುದೇ ಅರ್ಜಿಯನ್ನು ವಶಕ್ಕೆ ಪಡೆದಿಲ್ಲ. ಘಟನೆಯ ವೇಳೆಗೆ ಆರೋಪಿಯನ್ನು ಬಿಟ್ಟು ಸಾಕಷ್ಟು ಜನರು ಇದ್ದರು. ಘಟನೆ ಬೆಳಿಗ್ಗೆ 10-30ರಿಂದ 11-30ರ ವೇಳೆಗೆ ಆಗಿರುತ್ತದೆ. ಆ ವೇಳೆಯಲ್ಲಿ ಪಂಚಾಂಯಿತಿ ಕಚೇರಿಯಲ್ಲಿ ತುಂಬಾ ಜನರು ಇದ್ದರು ಎಂದರೆ ಸರಿ. ಅಶ್ಲೀಲ ಚಿತ್ರದಲ್ಲಿ ಏನೆಲ್ಲಾ ಇತ್ತು ಎಂದು ಚಾಸಾ-1ರವರು ನನಗೆ ಹೇಳಿಲ್ಲ ಎಂದರೆ ಸರಿ. ಸದ್ರಿ ಚಿತ್ರ ಎಷ್ಟು ಅವಧಿಯದ್ದು ಎಂದು ಚಾಸಾ-1 ರವರು ನನಗೆ ಹೇಳಿಲ್ಲ.

ಯಾವುದೇ ಸಾಕ್ಷಿದಾರರ ವಿಚಾರಣೆ ಮಾಡಿಲ್ಲ ಮತ್ತು ಅವರ ಹೇಳಿಕೆಗಳನ್ನು ಈ ಪ್ರಕರಣಕ್ಕಾಗಿ ಸೃಷ್ಟಿಸಿದ್ದು ಎಂದರೆ ಸರಿಯಲ್ಲ. ಎಲ್ಲಾ ಪಂಚನಾಮೆಗಳನ್ನು ಠಾಣೆಯಲ್ಲಿತಯಾರಿಸಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಸಹಿಗಳನ್ನು ಠಾಣೆಯಲ್ಲಿ ಪಡೆದಿರುತ್ತೇನೆ ಎಂದರೆ ಸರಿಯಲ್ಲ. ಮುಖ್ಯ ವಿಚಾರಣೆಯಲ್ಲಿ ಹೇಳಿದ ಯಾವುದೇ ತನಿಖೆ ಕೈಗೊಂಡಿಲ್ಲ ಎಂದರೆ ಸರಿಯಲ್ಲ. ಘಟನಾ ಸ್ಥಳಕ್ಕೆ ಭೇಟಿ ನೀಡಿಲ್ಲ ಎಂದರೆ ಸರಿಯಲ್ಲ. ಭಾವಚಿತ್ರವನ್ನು ಪ್ರಕರಣಕ್ಕಾಗಿ ಸೃಷ್ಟಿಸಿದ್ದು ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆ ಮತ್ತು ಮರುಹೇಳಿಕೆಗಳನ್ನು ಸೃಷ್ಟಿಸಿರುತ್ತೇವೆ ಎಂದರೆ ಸರಿಯಲ್ಲ. ಆರೋಪಿ ಯಾವುದೇ ಅಶ್ಲೀಲ ಚಿತ್ರವನ್ನು ಚಾಸಾ-1ರವರಿಗೆ ತೋರಿಸಿಲ್ಲ ಲೈಂಗಿಕ ಕಿರುಕುಳ ನೀಡಿಲ್ಲ ಎಂದರೆ ಸರಿಯಲ್ಲ.

ದೋಷಾರೋಪಣಾ ಪಟ್ಟಿಯಲ್ಲಿ ಆರೋಪಿಸಿರುವ ಯಾವುದೇ ಕೃತ್ಯ ನಡೆದಿಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದ ಎಲ್ಲಾ ವಿಚಾರಗಳು ಸುಳ್ಳು ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ:**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**